# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ತತ್ವಶಃ ಅನುಮತಿ ನೀಡಿರುವ 11 ಮೆ.ವ್ಯಾ. ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು ಮೆ : ಸನ್ ಪೋಟೋವೋಲ್‌ಟ್ಯಾಕ್ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರಿಗೆ ವರ್ಗಾಯಿಸಿ ಯೋಜನೆಯನ್ನು 80 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಪತ್ರ ಸಂಖ್ಯೆ : ಇಎನ್ 95 ಎನ್‌ಸಿಇ 2012 ದಿನಾಂಕ : 24.9.2012

2) ಸರ್ಕಾರದ ಪತ್ರ ಸಂಖ್ಯೆ : ಇಎನ್ 126 ಎನ್‌ಸಿಇ 2013(2) ದಿನಾಂಕ : 02.8.2013.

3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆಆರ್‌ಇಡಿ/08/SPVIPL-11 to 80 MW/ Bijapur/2013/1948 ದಿನಾಂಕ: 23.8.2013

4) ದಿನಾಂಕ 05.9.2013ರ ಹಂಚಿಕೆ ಸಮಿತಿಯ ನಡವಳಿ.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಮೆ:: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬಿಜಾಪುರ ಜಿಲ್ಲೆಯ ಬಿಜಾಪುರ ತಾಲ್ಲೂಕಿನ ಕನಮಾಡಿ ಗ್ರಾಮದಲ್ಲಿ 11 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನಾ ಘಟಕ ಸ್ಥಾಪಿಸುವ ಬಗ್ಗೆ ವಿಸ್ತೃತ ಯೋಜನಾ ವರದಿಯನ್ನು ಒಂದು ವರ್ಷದೊಳಗೆ ತಯಾರಿಸಿ ಕೆಆರ್‌ಇಡಿಎಲ್‌ಗೆ ಸಲ್ಲಿಸುವ ಷರತ್ತಿಗೊಳಪಟ್ಟು ದಿನಾಂಕ 05.05.2012ರ ಹಂಚಿಕೆ ಸಮಿತಿಯ ನಿರ್ಣಯದಂತೆ ತತ್ವಶಃ ಅನುಮತಿಯನ್ನು ನೀಡಲಾಗಿತ್ತು. ತದನಂತರ, ಸದರಿ ಯೋಜನೆಯ ಕುರಿತ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸಲು ಎರಡು ವರ್ಷಗಳ ಕಾಲಾವಕಾಶವನ್ನು ವಿಸ್ತರಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಅನುಮತಿ ನೀಡಲಾಗಿತ್ತು.

ಮೆ : ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬಿಜಾಪುರ ಜಿಲ್ಲೆಯ ಬಿಜಾಪುರ ತಾಲ್ಲೂಕಿನ ಕನಮಾಡಿ ಗ್ರಾಮದಲ್ಲಿ ತತ್ವಶಃ ಅನುಮೋದನೆ ನೀಡಿರುವ 11 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ : ಸನ್ ಪೋಟೋವೋಲ್‌ಟ್ಯಾಕ್ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರಿಗೆ ವರ್ಗಾಯಿಸಿ ಸದರಿ ಯೋಜನೆಯ ಸಾಮರ್ಥ್ಯವನ್ನು 80 ಮೆ.ವ್ಯಾ.ಗೆ ಹೆಚ್ಚಿಸುವ ಕುರಿತಂತೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸಿರುವುದಾಗಿ ತಿಳಿಸುತ್ತಾ, ಸದರಿ ಸಾಮರ್ಥ್ಯದ ಹೆಚ್ಚಳಕ್ಕೆ ಸಂಬಂಧಿಸಿದ ನಿಗಧಿತ ಶುಲ್ಕ ಪಾವತಿಸಿಕೊಂಡಿರುವುದಾಗಿ, ಈ ಯೋಜನೆಗೆ ಅವಶ್ಯಕವಾದ ಭೂಮಿಯು ಖಾಸಗಿ ಜಮೀನಾಗಿದ್ದು, ಉತ್ಪಾದನೆ ಆಗುವ ವಿದ್ಯುತ್ತನ್ನು ಸಂಬಂಧಿಸಿದ ಎಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಳ್ಳುವ ಹಾಗೂ ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿಗೊಳಪಟ್ಟು ವಗಾಯಿಸಿ ಸಾಮರ್ಥ್ಯ ಹೆಚ್ಚಿಸಬಹುದೆಂದು ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ನಡವಳಿಯಲ್ಲಿ ದಿನಾಂಕ : 05.9.2013ರಂದು ನಡೆದ ಹಂಚಿಕೆ ಸಮಿತಿ ಸಭೆಯು ಮೆ: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಬಿಜಾಪುರ ಜಿಲ್ಲೆಯ, ಬಿಜಾಪುರ ತಾಲ್ಲೂಕಿನ ಕನಮಾಡಿ ಗ್ರಾಮದಲ್ಲಿ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ತತ್ವಶ: ಅನುಮೋದನೆ ನೀಡಿರುವ 11 ಮೆ.ವ್ಯಾಟ್ ಸಾಮರ್ಥ್ಯವನ್ನು ಮೆ: ಸನ್ ಪೋಟೋವೋಲ್‌ಟ್ಯಾಕ್ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರಿಗೆ ವರ್ಗಾಯಿಸಿ ಸದರಿ ಯೋಜನೆಯನ್ನು 80 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವ ಪ್ರಸ್ತಾವನೆಗೆ ಸಮಿತಿಯು ಅನುಮೋದನೆ ನೀಡಿರುತ್ತದೆ.

.......2

ಪ್ರಸ್ತಾವಿತ ಪ್ರಕರಣದಲ್ಲಿ ಮೆ: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರಿಗೆ 11 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ತತ್ವಶ: ಅನುಮೋದನೆ ನೀಡಲಾಗಿದ್ದು, ಇನ್ನು ಯೋಜನೆಯ ಹಂಚಿಕೆ ಆದೇಶವನ್ನು ನೀಡಿರುವುದಿಲ್ಲ. ಮೆ: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಹಾಗೂ ವರ್ಗಾವಣೆ ಪ್ರಸ್ತಾವನೆಯಲ್ಲಿರುವ ಮೆ: ಸನ್ ಮೋಟೋವೋಲ್‌ಟ್ಯಾಕ್ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗಳು ಮೆ : ಆಶಿಯೋನ ಎನರ್ಜಿಯ ಸ್ಪೈನ್ ಕಂಪನಿಯ ಅಂಗ ಸಂಸ್ಥೆಗಳಾಗಿರುವುದನ್ನು ಪರಿಗಣಿಸಿ, ಮೊದಲಿಗೆ ಮೆ : ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ತತ್ವಶ: ಅನುಮೋದನೆಯಾಗಿರುವ 11 ಮೆ.ವ್ಯಾ. ಸಾಮರ್ಥ್ಯದ ಯೋಜನೆಯ ಹಂಚಿಕೆ ಆದೇಶ ನೀಡಿ ನಂತರದಲ್ಲಿ ಅಂದರೆ ಅದೇ ಆದೇಶದಲ್ಲಿ ಮೆ: ಸನ್ ಮೋಟೋವೋಲ್‌ಟ್ಯಾಕ್ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಯೋಜನೆ ವರ್ಗಾಯಿಸಿ ಸಾಮರ್ಥ್ಯ ಹೆಚ್ಚಿಸಲು ತೀರ್ಮಾನಿಸಿದೆ. ಅದುದರಿಂದ, ಈ ಕೆಳಕಂಡಂತೆ ಆದೇಶಿಸಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 228 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 09.10.2013.**

ಸರ್ಕಾರದ ಪತ್ರ ಸಂಖ್ಯೆ : ಇಎನ್ 95 ಎನ್‌ಸಿಇ 2012 ದಿನಾಂಕ : 24.9.2012ರಲ್ಲಿ ಮೆ:: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬಿಜಾಪುರ ಜಿಲ್ಲೆಯ ಬಿಜಾಪುರ ತಾಲ್ಲೂಕಿನ ಕನಮಾಡಿ ಗ್ರಾಮದಲ್ಲಿ ತತ್ವಶ: ಅನುಮತಿ ನೀಡಿರುವ 11 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸದರಿ ಕಂಪನಿಯವರಿಗೆ ಹಂಚಿಕೆಮಾಡಿದೆ.

ಮೆ : ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರಿಗೆ ಹಂಚಿಕೆಯಾಗಿರುವ 11 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ : ಸನ್ ಮೋಟೋವೋಲ್‌ಟ್ಯಾಕ್ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು 80 ಮೆ.ವ್ಯಾ.ಗೆ ಹೆಚ್ಚಿಸಿ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಲಾಗಿದೆ :-

**SCHEDULE**

| Toposheet No. | Proposed Enhaced capacity in MW | Near by villages of the proposed area taluk and district | Geographical area description of the project |
|---|---|---|---|
| 47 P/5 | 80 MW<br>(40 Nos x 2000 KW) | Kanamadi Village in Bijapur Taluk, Bijapur District. | The area earmarked is in the shape of triangle. It is ground level and has moderate elevation varying from 640 to 664 and it is completely open type. The entire area is situated on the east of Kanamadi village and is covered in the following Geographical co-ordiantes:<br><br>**Latitude**: 16°52'24"- 16°55'41"N<br>**Longitude**: 75°20'8.5"- 75°24'2.5"E<br>**Peaks:** 640, 660, 664 & 648 m Amsl |
| **Total** | **80 MW** | | |

1. ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ 18.7.2011ರಲ್ಲಿ ನಿಗದಿಪಡಿಸಿರುವ (ಈ ಯೋಜನಾ ಅವಧಿಯನ್ನು ತತ್ವಶಃ ಅನುಮೋದನೆ ನೀಡಿದ ದಿನಾಂಕ: 24.9.2012ರಿಂದ ಪರಿಗಣಿಸಿ) ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ, ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

......3